ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:136 RNI NO.KAR KAN/2003/10452:No./PMG/KA/NK/BM/743/24-26 ಗುರುವಾರ ದಿನಾಂಕ: 25-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2

ಭಾರೀ ಕುತೂಹಲ ಮೂಡಿಸಿದ ಜಗದೀಶ್ ಶೆಟ್ಟರ್ ಭೀಮಶಿ ಜಾರಕಿಹೊಳಿ ಭೇಟಿ

ಬೆಳಗಾವಿ : ನಗರದ ಕುವೆಂಪು ನಗರದಲ್ಲಿರುವ ಭೀಮಶಿ ಜಾರಕಿಹೊಳಿ ಯವರ ನಿವಾಸಕ್ಕೆ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿ ನೀಡಿದ್ದರು, ಶೆಟ್ಟರ್ ಶಾಲು ಹೊದಿಸಿ ಭೀಮಶಿ ಜಾರಕಿಹೊಳಿಯವರು ಸ್ವಾಗರ್ತಿಸಿದ್ದರು .

ಭೀಮಶಿ ಜಾರಕಿಹೊಳಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿಯಾಗಿ ಸಮಾ ಲೋಚನೆ ನಡೆಸಿದ್ದಾರೆ. ಕುವೆಂಪು ನಗರದಲ್ಲಿರುವ ನಿವಾಸ ದಲ್ಲಿ ಉಭಯ ನಾಯಕರ ಸಭೆ ನಡೆದಿದೆ. ಬೆಳಗಾವಿಯ ಕುವೆಂಪು ನಗರದಲ್ಲಿರುವ ಭೀಮಶಿ ಜಾರಕಿಹೊಳಿ ಯವರ ನಿವಾಸಕ್ಕೆ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿ ನೀಡಿದ್ದರು, ಶೆಟ್ಟರ್‌ಗೆ ಶಾಲು ಹೊದಿಸಿ ಭೀಮಶಿ ಜಾರಕಿಹೊಳಿಯವರು ಸ್ವಾಗರ್ತಿಸಿದ್ದರು.

ಲೋಕಸಭಾ ಚುನಾವಣೆ-2024

01-ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ: ಎರಡನೇ ಹಂತದ ಇ.ವಿ.ಎಂ.ಯಾರ್ಂಡಮೈಜೇಷನ್

ಚಿಕೋಡಿ, ಏ.-: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಮತಗಟ್ಟೆವಾರು ಎಲೆಕ್ಟ್ರಾನಿಕ್ ಮತಯಂತ್ರಗಳ ಯಾರ್ಂಡಮೈಜೇಷನ್ ಅನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಎರಡನೇ ಹಂತದ ಯಾರ್ಂಡಮೈಜೇಷನ್ ಜರುಗಿಸಲಾಯಿತು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್, ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಅಭ್ಯರ್ಥಿಗಳ ಸಮ್ಮುಖದಲ್ಲಿ ಚುನಾವಣಾದಿ ಕಾರಿಗಳ ಕಚೇರಿಯಲ್ಲಿ ಬುಧವಾರ(ಏ.24) ರಂದು ಯಾರ್ಂಡಮೈಜೇಷನ್ ಪ್ರಕ್ರಿಯೆ ಜರುಗಿತು. ಎರಡನೇ ಹಂತದ ಇ.ವಿ.ಎಂ. ಯಾರ್ಂಡಮೈಸೇಷನನಲ್ಲಿ 4547 ಬ್ಯಾಲೆಟ್ ಯುನಿಟ್, 2461 ಕಂಟ್ರೋಲ್ ಯುನಿಟ್ ಹಾಗೂ 2461 ವಿ.ವಿ.ಪ್ಯಾಟಗಳ ಯಾರ್ಂಡಮೈಸೇಷನ್ ಕೈಗೊಳ್ಳಲಾಯಿತು ಈ ಸಂದರ್ಭದಲ್ಲಿ ಮಾತನಾಡಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಎರಡನೇ ಹಂತದ ಯಾರ್ಂಡಮೈಜೇಷನ್ ಮೂಲಕ ನಿರ್ಧರಿಸಲಾಗಿರುವ ಎಲೆಕ್ಟ್ರಾನಿಕ್ ಮತಯಂತ್ರಗಳನ್ನು ಮಸ್ಟರಿಂಗ್ ದಿನ ಮತಗಟ್ಟೆ ಅಧಿಕಾರಿಗಳ ತಂಡದ ಮೂಲಕ ಆಯಾ ಮತಗಟ್ಟೆಗಳಿಗೆ ಕಳುಹಿಸಲಾಗುವುದು ಎಂದು ತಿಳಿಸಿದರು. ಏ.25, 26 ಹಾಗೂ 27 ರಂದು ಮನೆ ಮನೆಗಳಿಗೆ ತೆರಳಿ ಮತಸಂಗ್ರಹ ನಡೆಯಲಿದೆ. ಈಗಾಗಲೇ ನಿಗದಿತ ನಮೂನೆ ಭರ್ತಿಮಾಡುವ ಮೂಲಕ ಮನೆಯಿಂದ ಮತ ಚಲಾವಣೆಗೆ ಒಪ್ಪಿಗೆ ನೀಡಿರುವ 85 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನರಿಂದ ಮತಸಂಗ್ರಹ ಮಾಡಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ವಿವರಿಸಿದರು. ಮನೆ ಮನೆಗಳಿಗೆ ತೆರಳಿ ಮತ ಸಂಗ್ರಹಿಸುವ ಸಂದರ್ಭದಲ್ಲಿ ರಾಯಕೀಯ ಪಕ್ಷಗಳ ಏಜೆಂಟರು ಉಪಸ್ಥಿತರಿರಬಹುದು. ಆದರೆ ಈ ಬಗ್ಗೆ ಆಯಾ ಪಕ್ಷ ಅಥವಾ ಅಭ್ಯರ್ಥಿಗಳು ಏಜೆಂಟರನ್ನು ನೇಮಿಸಿ ಮುಂಚಿತವಾಗಿ ತಿಳಿಸಬೇಕು ಎಂದರು.

ಭಾಷಣ ಮಾಡುವ ವೇಳೆ ಕುಸಿದು ಬಿದ್ದ ಗಡ್ಕರಿ

ಮಹಾರಾಷ್ಟ್ರ: ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಮಹಾರಾಷ್ಟ್ರದ ಯವತ್ಮಾಲ್‌ನಲ್ಲಿ ಚುನಾವಣಾ ಪ್ರಚಾರ ನಡೆಸಿ ಭಾಷಣ ಮಾಡುವ ವೇಳೆ ವೇದಿಕೆಯ ಮೇಲೆ ಹಶಾತ್ ಕುಸಿದು ಬಿದ್ದು ಅಸ್ವಸ್ಥಗೊಂಡಿದ್ದಾರೆ.

ಬುಧವಾರ ರ್‍ಯಾಲಿಯಲ್ಲಿ ಭಾಗಿಯಾಗಲು ಬಳಿಕ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಲು ಗಡ್ಕರಿ ಯವತ್ಮಾಲ್‌ನ ಪುಸಾದ್‌ಗೆ ಬಂದಿದ್ದರು. ಈ ವೇಳೆ ವೇದಿಕೆಯಲ್ಲಿ ಮಾತನಾಡುತ್ತಿದ್ದಾಗ ಏಕಾಏಕಿ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ ಕೂಡಲೇ ಪಕ್ಷದ ಹಿರಿಯ ನಾಯಕರು ಸೇರಿ ಚಿಕಿತ್ಸೆಗೆ ಕರೆದೊಯ್ದಿದ್ದಾರೆ.

ಮೊದಲ ಹಂತದಲ್ಲಿ ಚುನಾವಣಾ ಪ್ರಚಾರಕ್ಕೆ ತೆರಳಿರುವ ನಾಗ್ಪುರದ ಬಿಜೆಪಿ ಅಭ್ಯರ್ಥಿ ಗಡ್ಕರಿ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ನಾಯಕ ರಾಜಶ್ರೀ ಪಾಟೀಲ್ ಅವರ ಪರ ಪ್ರಚಾರ ನಡೆಸುತ್ತಿದ್ದರು, ಅವರು ಯವತ್ಮಾಲ್-ವಾಶಿಮ್ ಲೋಕಸಭಾ ಕ್ಷೇತ್ರದಿಂದ ಆಡಳಿತಾರೂಢ ಮಹಾಯುತಿ ಮೈತ್ರಿಕೂಟದ ಅಭ್ಯರ್ಥಿಯಾಗಿದ್ದಾರೆ.

ಮಹಾರಾಷ್ಟ್ರದ ಬುಲ್ಧಾನ, ಅಕೋಲಾ, ಅಮರಾವತಿ, ವಾರ್ಧಾ, ಹಿಂಗೋಲಿ, ನಾಂದೇಡ್ ಮತ್ತು ಪರ್ಭಾನಿ ಜೊತೆಗೆ ಯವತ್ಮಾಲ್, ಏಪ್ರಿಲ್ 26 (ಶುಕ್ರವಾರ) ಎರಡನೇ ಹಂತದ ಮತದಾನ ನಡೆಯಲಿದೆ.

ಕಾಂಗ್ರೆಸ್ ತುಷ್ಟೀಕರಣ ರಾಜಕೀಯಕ್ಕೆ ಮುಸ್ಲೀಮರಿಗೆ ಮೀಸಲಾತಿಗೆ ಬೆಂಬಲಿಸುತ್ತದೆ: ಬಸವರಾಜ ಬೊಮ್ಮಾಯಿ

ಗದಗ: ಧರ್ಮ ಆಧಾರಿತ ಮೀಸಲಾತಿಗೆ ಅವಕಾಶ ಇಲ್ಲ ಎಂದು ಸಂವಿಧಾನದಲ್ಲಿ ಸ್ಪಷ್ಟವಾಗಿದೆ. ಹೀಗಿದ್ದರೂ ಕಾಂಗ್ರೆಸ್ ತುಷ್ಟೀಕರಣದ ರಾಜಕಾರಣಕ್ಕೆ ಮುಸ್ಲೀಮರ ಮೀಸಲಾತಿಗೆ ಬೆಂಬಲ ಕೊಡುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗದಗನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಧರ್ಮ ಆಧಾರಿತ ಮೀಸಲಾತಿಗೆ ಅವಕಾಶ ಇಲ್ಲ ಅಂತಾ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಆಕ್ಷೇಪದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಮುಸ್ಲೀಮರಲ್ಲೂ ಚಪ್ಪರಬಂದ್, ನದಾಫ್, ಪಿಂಜಾರ್ ಸೇರಿದಂತೆ 24 ಜಾತಿಯವರು ಬಹಳ ಹಿಂದುಳಿದವರಿದ್ದಾರೆ. ಅವುಗಳಿಗೆ ಈಗಾಗಲೇ 2ಎ ಯಲ್ಲಿ ಮೀಸಲಾತಿ ಇದೆ. ಅವರಿಗೆ ಹೆಚ್ಚುವರಿಯಾಗಿ ಶೇ 4 ಪರ್ಸೆಂಟ್ ಮೀಸಲಾತಿ ಕೊಟ್ಟಿದ್ದರು.

ಅದನ್ನೇ ಹಿಂದುಳಿದ ವರ್ಗಗಳ ಆಯೋಗ ಆಕ್ಷೇಪ ಮಾಡಿದೆ. ಈಗ ಆ ಕೇಸ್ ಸುಪ್ರೀಂ ಕೋರ್ಟನಲ್ಲಿದೆ ನೋಡೋಣ ಎಂದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಆಸ್ತಿ ಮರು ಹಂಚಿಕೆ ಮಾಡುತ್ತಾರೆ ಎನ್ನುವ ಮಾತಿಗೆ ಪ್ರತಿಕ್ರಿಯಿಸಿದ ಅವರು, ಆಸ್ತಿ ಕೇಳುವುದಕ್ಕೆ ಬಹಳ ಚನ್ನಾಗಿ ಅನಸುತ್ತದೆ. ಆದರೆ, ಯಾರದ್ದು ಕಿತ್ತುಕೊಂಡು ಯಾರಿಗೆ ಕೊಡುತ್ತಾರೆ ? ಏನ್ ಸರ್ವೆ ಮಾಡುತ್ತಾರೆ. ಚುನಾವಣೆ ಸಂದರ್ಭದಲ್ಲಿ ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಕೆಲಸ ಮಾಡಬಾರದು. ಕಾಂಗ್ರೆಸ್ ನೀತಿ ಇದ್ದಲ್ಲಿ ಸ್ಪಷ್ಟವಾಗಿ ಹೇಳವೇಕು. ಸಂವಿಧಾನದಲ್ಲಿ ವಾಕ್ ಸ್ವಾತಂತ್ರದ ಹಾಗೆ ಆಸ್ತಿ ಮಾಡುವ ಹಕ್ಕೂ ಇದೆ. ಕಾಂಗ್ರೆಸ್ ನವರು ಸಂವಧಾನದ ವಿರುದ್ಧ ಕೆಲಸ ಮಾಡಿತ್ತಿದ್ದಾರೆ. ಜವಾಬ್ದಾರಿ ಸ್ಥಾನದಲ್ಲಿ ಇದ್ದವರು ಹೀಗೆ ಮಾತ್ನಾಡಬಾರದು ಎಂದರು.

ಕಾಂಗ್ರೆಸ್ ಮನಸ್ಥಿತಿ : ಹುಬ್ಬಳ್ಳಿ ಕಾಲೇಜ್ ಯುವತಿ ನೇಹಾ ಹತ್ಯೆ ಪ್ರಕರಣ ಸಾಮಾನ್ಯ ಎಂದಿದ್ದ ಸಚಿವ ಶಿವಾನಂದ ಪಾಟೀಲ ಅವರ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಆಕ್ರೋಶ ವ್ಯಕ್ತಪಡಿಸಿದ ಬಸವರಾಜ ಬೊಮ್ಮಾಯಿ, ಸಚಿವ ಶಿವಾನಂದ ಪಾಟೀಲ ಹೇಳಿಕೆ ಕಾಂಗ್ರೆಸ್ ನ ಮನಸ್ಥಿತಿಯನ್ನು ತೋರಿಸುತ್ತದೆ. ಕೊಲೆ ಮಾಡಿದವ ಅಲ್ಪ ಸಂಖ್ಯಾತನದ್ದಾನೆ. ತುಷ್ಟೀಕರಣ ರಾಜಕಾರಣದ ಚಶ್ಮಾ ಹಾಕಿಕೊಂಡು ಪ್ರಕರಣವನ್ನ ಕಾಂಗ್ರೆಸ್ ನೋಡುತ್ತಿದೆ. ಈ ಪ್ರಕರಣವನ್ನು ಗೌಣ ಮಾಡುವುದಕ್ಕಾಗಿ ಈ ಥರದ ಹೇಳಿಕೆಯನ್ನು ನೀಡುತ್ತಿದ್ದಾರೆ. ಇದು ಸಮಾಜಕ್ಕೆ ಬಹಳ ನೋವುಂಟು ಮಾಡುವ ಕೆಲಸ. ಇಂಥ ಹೇಳಿಕೆ ನೇಹಾ ಕಳೆದುಕೊಂಡು ನೋವಿನಲ್ಲಿರುವ ಕುಟುಂಬಕ್ಕೂ ನೋವು ತರುತ್ತದೆ. ಶಿವಾನಂದ ಪಾಟೀಲ್ ಅವರು ಯಾವಾಗಲೂ ಹೀಗೆ ಮಾತನಾಡುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಇಂಥವರೇ ಬೇಕಾಗಿದ್ದಾರೆ ಎಂದು ಹೇಳಿದರು.ಇದೇ ವೇಳೆ, ಚೆಂಬು, ಅಕ್ಷಯ ಪಾತ್ರೆಯ ಮಧ್ಯೆ. ಪ್ರಧಾನ ನರೇಂದ್ರ ಮೋದಿ ಅವರ ಅಕ್ಷಯ ಪಾತ್ರೆ ಬಗ್ಗೆ ಜನರ ಒಲವಿದೆ ಎಂದು ಹೇಳಿದರು.

ಜುಲೈ 13 ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್

ಕೊಪ್ಪಳ, ಏಪ್ರಿಲ್ 24 : ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನರ್ದೇಶನದ ಮೇರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ಜುಲೈ 13 ರಂದು ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ಆಯೋಜಿಸಲಾಗಿದೆ.ಅಂದು ಜಿಲ್ಲೆಯ ಕೊಪ್ಪಳ, ಗಂಗಾವತಿ, ಕುಷ್ಟಗಿ ಮತ್ತು ಯಲಬುರ್ಗಾ ನ್ಯಾಯಾಲಯಗಳಲ್ಲಿ ಚಾಲ್ತಿ ಇರುವ ಪ್ರಕರಣಗಳು ಹಾಗೂ ಇನ್ನೂ ನ್ಯಾಯಾಲಯಕ್ಕೆ ದಾಖಲಿಸದೇ ಇರುವ ಪ್ರಕರಣಗಳನ್ನು ವ್ಯಾಜ್ಯ ಪೂರ್ವ ಪ್ರಕರಣಗಳು ಎಂದು ಪರಿಗಣಿಸಿ ವಿವಿಧ ಪ್ರಕರಣಗಳಾದ ಮೋಟಾರು ವಾಹನ ಅಪ ಘಾತ ಪರಿಹಾರದ ಪ್ರಕರಣಗಳು, ಅಸಲು ದಾವೆಗಳು, ಬ್ಯಾಂಕುಗಳಿಗೆ ಸಂಬಂ ಧಿಸಿದ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ವೈವಾಹಿಕ ಹಾಗೂ ಜೀವನಾಂಶ ಪ್ರಕರಣಗಳು, ಕಾನೂನನ್ವಯ ರಾಜೀ ಆಗಬಹು ದಾದ ಕ್ರಿಮಿನಲ್ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ರಾಜೀ ಆಗಬಹುದಾದ ಎಲ್ಲಾ ಪ್ರಕರಣಗಳನ್ನು ಆಯಾ ನ್ಯಾಯಾಲ ಯಗಳಲ್ಲಿ ಇತ್ಯರ್ಥಪಡಿಸಲಾಗುವುದು. ಕಕ್ಷಿದಾರರು, ಸಾರ್ವಜನಿಕರು ಇದರ ಸದುಪ ಯೋಗ ಪಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಚಂದ್ರಶೇಖರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದೇವೇಂದ್ರ ಪಂಡಿತ್ ಅವರು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೈಕ್ ರ್‍ಯಾಲಿ ಮೂಲಕ ವಿಶೇಷಚೇತನರಿಂದ ಮತದಾನ ಜಾಗೃತಿ

ಸ್ವೀಪ್ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ: ಮೆಚ್ಚುಗೆ

ಕೊಪ್ಪಳ, ಏಪ್ರಿಲ್ 24 : ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ನಗರದಲ್ಲಿ ಬುಧವಾರ ಬೈಕ್ ರ್‍ಯಾಲಿ ಮೂಲಕ ವಿಶೇಷಚೇತನರಿಂದ ವಿಶೇಷ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಮತ್ತು ವಿಕಲಚೇತನರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆವರಣದಿಂದ ಕೇಂದ್ರೀಯ ಬಸ್ ನಿಲ್ದಾಣದವರೆಗೆ ಹಮ್ಮಿಕೊಂಡ ಈ ಸ್ವೀಪ್ ಜಾಗೃತಿ ವಿಶೇಷ ಅಭಿಯಾನ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾ ಧಿಕಾರಿ ಗಳಾದ ನಲಿನ್ ಅತುಲ್ ಅವರು ಚಾಲನೆ ನೀಡಿ, ವಿಶೇಷಚೇತನರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರತಿಜ್ಞಾವಿಧಿ ಸ್ವೀಕಾರ: ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ಅವರು ಮತದಾನ ಜಾಗೃತಿ ಪ್ರತಿಜ್ಞಾವಿಧಿ ಬೋಧಿಸಿದರು. ಇದೇ ವೇಳೆ ನೆರೆದಿದ್ದ ಎಲ್ಲರೂ ಪ್ರತಿಜ್ಞಾವಿಧಿ ಸ್ವೀಕರಿಸಿದರು. ವಿಕಲಚೇತನ ಮತದಾರರ ಜಿಲ್ಲಾ ಚುನಾವಣಾ ರಾಯಭಾರಿ ಪೂರ್ಣಿಮಾ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ 16,000 ವಿಶೇಷಚೇತನ ಮತದಾರರಿದ್ದು, ಕಡ್ಡಾಯವಾಗಿ ಮತದಾನ ಮಾಡುವಂತೆ ಅರಿವು ಮೂಡಿಸಲಾಗುತ್ತಿದೆ. ಮೇ 7ರಂದು ನಡೆಯಲಿರುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಎಲ್ಲಾ ವಿಶೇಷಚೇತನ ಮತದಾರರು ಮತದಾನದ ಹಕ್ಕನ್ನು ಚಲಾಯಿಸುತ್ತೇವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನರ್ದೇಶಕರಾದ ತಿಪ್ಪಣ್ಣ ಸರಸಗಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನರ್ದೇಶಕರಾದ ಶ್ರೀಶೈಲ ಬಿರಾದಾರ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳಾದ ಶ್ರೀದೇವಿ ಎಸ್. ಎನ್., ಕೊಪ್ಪಳ ತಾಪಂ ಇಓ ದುಂಡಪ್ಪ ತುರಾದಿ, ಸ್ವೀಪ್ ಜಿಲ್ಲಾ ಐಕಾನ್‌ಗಳಾದ ಶಿವಕುಮಾರ ಮಾಲಿಪಾಟೀಲ್, ಮಹೆಬೂಬ್ ಕಿಲ್ಲೆದಾರ, ಜಿಲ್ಲಾ ಐಇಸಿ ಸಂಯೋಜಕರಾದ ಶ್ರೀನಿವಾಸ ಚಿತ್ರಗಾರ, ಸೇರಿದಂತೆ ಇತರರು ಹಾಜರಿದ್ದರು.

ವಿಶೇಷ ಬೈಕ್ ರ್‍ಯಾಲಿ: ಈ ಅಭಿಯಾನದಲ್ಲಿ 100 ಕ್ಕಿಂತ ಅಧಿಕ ವಿಶೇಷಚೇತನರು ತಮ್ಮ ತ್ರಿಚಕ್ರ ವಾಹನದೊಂದಿಗೆ ಭಾಗವಹಿಸಿ ಜಿಲ್ಲಾಡಳಿತ ಭವನದಿಂದ ಹೊರಟು ಬಸವೇಶ್ವರ (ಗಂಜ್) ಸರ್ಕಲ್, ಅಶೋಕ್ ವೃತ್ತ ಮಾರ್ಗವಾಗಿ ಕೇಂದ್ರ ಬಸ್ ನಿಲ್ದಾಣದವರೆಗೆ ಸಂಚರಿಸಿ, ಜಾಗೃತಿ ಫಲಕಗಳನ್ನು ಹಿಡಿದು ಮತದಾರರಿಗೆ ಮತದಾನದ ಅರಿವು ಮೂಡಿಸಿದ್ದು ವಿಶೇಷವಾಗಿತ್ತು.

ವಾರ್ತಾ ಇಲಾಖೆಯಲ್ಲಿ ಡಾ.ರಾಜ್‌ಕುಮಾರ್ ಜಯಂತಿ ಆಚರಣೆ; ಪುಷ್ಪ ನಮನ ಸಲ್ಲಿಕೆ

ಬಳ್ಳಾರಿ,ಏ.24:ಭಾರತೀಯ ಚಿತ್ರರಂಗ ಕಂಡ ಅದ್ಭುತ ನಟ, ಪ್ರತಿಷ್ಠಿತ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತ ಡಾ.ರಾಜ್‌ಕುಮಾರ್ ಅವರ 96 ನೇ ಜಯಂತಿಯನ್ನು ಇಲ್ಲಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಬುಧವಾರ ಸರಳವಾಗಿ ಆಚರಿಸಲಾಯಿತು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆ ಜಾರಿ ಹಿನ್ನಲೆಯಲ್ಲಿ ಡಾ.ರಾಜ್‌ಕುಮಾರ್ ಅವರ ಭಾವಚಿತ್ರಕ್ಕೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನರ್ದೇಶಕ ತುಕಾರಾಂ ರಾವ್ ಬಿ.ವಿ ಅವರು ಪುಷ್ಪ ನಮನ ಸಲ್ಲಿಸುವ ಮೂಲಕ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ಪಿಂಚಣಿ ಮತ್ತು ಸಣ್ಣ ಉಳಿತಾಯ ಇಲಾಖೆಯ ಸಹಾಯಕ ನರ್ದೇಶಕ ಟಿ.ಹೊನ್ನುರಪ್ಪ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಥಮ ದರ್ಜೆ ಸಹಾಯಕ ವಿ.ಪಿ.ಗುರುರಾಜ್, ಸಿಬ್ಬಂದಿಗಳಾದ ರೋಜಾ ಮೇರಿ, ಹೆಚ್.ವಿಜಯ್ ಕುಮಾರ್, ಹನುಮೇಶ್.ಹೆಚ್, ಮಲ್ಲೇಶಪ್ಪ.ವೈ., ವರದಿಗಾರರಾದ ಮಹೇಂದ್ರ ಕುಮಾರ್, ಪಿ.ಟಿ.ಚೌದರಿ, ರವಿ, ಛಾಯಾಗ್ರಾಹಕ ರುದ್ರಮುನ ಸ್ವಾಮಿ, ತರಬೇತುದಾರರಾದ ಅಭಿಷೇಕ್, ತಿಪ್ಪೇಸ್ವಾಮಿ ಮತ್ತು ಎಂಸಿಎಂಸಿ ಸಮಿತಿಯ ಸಿಬ್ಬಂದಿ ಗಳಾದ ತಿಪ್ಪೇಸ್ವಾಮಿ, ರಾಜು.ವಿ ಉಪಸ್ಥಿತರಿದ್ದರು.

ಹೆಬ್ಬಾಳಕರ ವಿರುದ್ಧ ಜಗದೀಶ್ ಶೆಟ್ಟರ್ ಗರಮ

ಬೆಳಗಾವಿ.ಚುನಾವಣೆಯ ಪ್ರಚಾರದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ನನ್ನ ವಿರುದ್ಧ ಕೀಳುಮಟ್ಟದ ಹೇಳಿಕೆ ನೀಡುತ್ತಿರುವುದು ಸರಿಯಲ್ಲ ಎಂದು ಬೆಳಗಾವಿ ಲೋಕಸಭಾ ಮತಕ್ಷೇತ್ರದ ಅಭ್ಯರ್ಥಿ ಜಗದೀಶ್ ಶೆಟ್ಟರ್